## ಕರ್ನಾಟಕ ಸರ್ಕಾರ

ಸಂಖ್ಯೆ : ಕಪಂರಾಅ/ಅಭಿವೃದ್ಧಿ/560/2022

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:12.12.2022.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ದಿನಪತ್ರಿಕೆ, ನಿಯತಕಾಲಿಕೆಗಳ ವೆಚ್ಚ ಭರಿಸುವ ಬಗ್ಗೆ.

**ಉಲ್ಲೇಖ:1.** ಸರ್ಕಾರದ ಸುತ್ತೋಲೆ ಸಂಖ್ಯೆ:KPRC-DEVOCCM/3/2020, ದಿನಾಂಕ: 05.10.2020.
**2.** ದಿನಾಂಕ: 27.05.2022ರ ಸಭಾ ನಡವಳಿ.

***

ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟಿರುವ ಪ್ರಸ್ತುತ 5575 ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಮಾಸಿಕ ಗೌರವಧನವನ್ನು ಬಿಡುಗಡೆ ಮಾಡಲಾಗುತ್ತಿರುತ್ತದೆ. ಅದರಂತೆ, ಗ್ರಂಥಾಲಯಗಳಲ್ಲಿನ ದಿನಪತ್ರಿಕೆಗಳು ಹಾಗೂ ನಿಯತಕಾಲಿಕೆಗಳ ನಿರ್ವಹಣೆಗಾಗಿ ತಗಲುವ ವೆಚ್ಚವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕವೇ ಭರಿಸಬೇಕಿರುತ್ತದೆ. ಈಗಾಗಲೇ ಉಲ್ಲೇಖ(1)ರಲ್ಲಿ ಗ್ರಂಥಾಲಯಗಳ ದಿನ ಪತ್ರಿಕೆ ಮತ್ತು ನಿಯತಕಾಲಿಕೆಗಳ ನಿರ್ವಹಣೆಗಾಗಿ ಮಾಸಿಕ ರೂ.400/-ಗಳನ್ನು ನೀಡಲಾಗುತ್ತಿರುತ್ತದೆ. ಮುಂದುವರೆದು, ಉಲ್ಲೇಖ(2)ರ ಸಭಾ ನಡವಳಿಯಲ್ಲಿ ತೀರ್ಮಾನಿಸಿರುವಂತೆ ಗ್ರಂಥಾಲಯಗಳ ದಿನ ಪತ್ರಿಕೆ ಮತ್ತು ನಿಯತಕಾಲಿಕೆಗಳ ನಿರ್ವಹಣೆಗಾಗಿ ಮಾಸಿಕ ರೂ 400/- ರಿಂದ ರೂ..1,000/-ಗಳಿಗೆ ಹೆಚ್ಚಿಸಿ ಭರಿಸಲು ಕ್ರಮವಹಿಸಬೇಕಾಗಿದೆ.

ಅದರಂತೆ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಂಥಾಲಯಗಳ ದಿನ ಪತ್ರಿಕೆ ಮತ್ತು ನಿಯತಕಾಲಿಕೆಗಳ ನಿರ್ವಹಣೆಗಾಗಿ, ಪ್ರತಿ ಗ್ರಂಥಾಲಯದ ವೆಚ್ಚಕ್ಕಾಗಿ ಮಾಸಿಕ ರೂ.1000/- (ಒಂದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹವಾಗುವ ಗ್ರಂಥಾಲಯದ ಕರದಿಂದ ಭರಿಸುವಂತೆ ಸೂಚಿಸಿದೆ.

(ಉಮಾ ಮಹಾದೇವನ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು(ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು(ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) , ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಆಯುಕ್ತರು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
4. ನಿರ್ದೇಶಕರು, ಪಂಚಾಯತ್ ರಾಜ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.